2976120719448 47

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು(ನಗರ ಯೋಜನೆ-ದ) ರವರ ಕಛೇರಿ,ಮಹಾನಗರ ಪಾಲಿಕೆ,ಎನ್.ಆರ್. ವೃತ್ತ,ಬೆಂಗಳೂರು-02.**

O/o. Joint Director Town Planning (South)

ಸಂಖ್ಯೆ: ಜೆಡಿಟಿಪಿ(ದ)/ಪ್ರಾ.ಪ/ಸನಿ/07/2019-20

ದಿನಾಂಕ: 05-07-2019.

## ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಖಾತಾ ಸಂಖ್ಯೆ 140, ಪಿಐಡಿ ಸಂಖ್ಯೆ 67-3-140, ಇಂಡಸ್ಟ್ರಿಯಲ್ ಲೇಔಟ್, ಕೋರಮಂಗಲ, ದಕ್ಷಿಣ ವಲಯ, ವಾರ್ಡ್ ಸಂಖ್ಯೆ 151, ಬೆಂಗಳೂರು ಇಲ್ಲಿ ನಿರ್ಮಿಸಲಾಗುತ್ತಿರುವ ವಾಣಿಜ್ಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/JD South/ 0291/17-18 ದಿನಾಂಕ: 08-02-2019.
2) ಅರ್ಜಿದಾರರ ಮನವಿ ದಿನಾಂಕ: 14-02-2019.
3) ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ದಿನಾಂಕ: 02-03-2019.
4) ಮಾನ್ಯ ಆಯುಕ್ತರು ರವರ ಆದೇಶದ ದಿನಾಂಕ: 24-06-2019.

*****

ಖಾತಾ ಸಂಖ್ಯೆ 140, ಪಿಐಡಿ ಸಂಖ್ಯೆ 67-3-140, ಇಂಡಸ್ಟ್ರಿಯಲ್ ಲೇಔಟ್, ಕೋರಮಂಗಲ, ದಕ್ಷಿಣ ವಲಯ, ವಾರ್ಡ್ ಸಂಖ್ಯೆ 151, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ 2ತಳ+ನೆಲ+ಮೇಲಿನ 9 ಅಂತಸ್ತುಗಳ ವಾಣಿಜ್ಯ ಕಟ್ಟಡ ನಿರ್ಮಿಸಲು ಈ ಕಛೇರಿಯಿಂದ ಎಲ್.ಪಿ ಸಂಖ್ಯೆ: BBMP/ Addl.Dir/JD South/ 0291/17-18 ದಿನಾಂಕ: 08-02-2019 ರಂದು ನಕ್ಷೆ ಮಂಜೂರಾತಿ ನೀಡಲಾಗಿದೆ. ಉಲ್ಲೇಖ (2) ರ ಮನವಿಗೆ ಸಂಬಂಧಿಸಿದಂತೆ, ವಾಣಿಜ್ಯ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 18-02-2019 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ನೀಡಿರುತ್ತಾರೆ. ಅರ್ಜಿದಾರರು ನಕ್ಷೆ ಮಂಜೂರಾತಿ ಸಮಯದಲ್ಲಿ ಈ ಕಛೇರಿಗೆ ಸಲ್ಲಿಸಿದ ಶುಲ್ಕಕ್ಕೆ ಸಂಬಂಧಿಸಿದಂತೆ ರಶೀದಿ ಸಂಖ್ಯೆ: RE-ifms624-TP/000006 ದಿನಾಂಕ: 06-04-2018 ರಂದು ಸಂದಾಯಿಸಿಕೊಳ್ಳಲಾದ ಮೊತ್ತ ರೂ. 20,40,79,000/- ಗಳಲ್ಲಿ ಹೆಚ್ಚುವರಿಯಾಗಿ ರೂ. 4,87,86,322/- ಪಾವತಿ ಮಾಡಿದ್ದು, ಸದರಿ ಮೊತ್ತದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 81,83,000/- ಗಳನ್ನು ಉಲ್ಲೇಖ (4) ರಂತೆ ಹೊಂದಾಣಿಕೆ ಮಾಡಿಕೊಳ್ಳಲಾಗಿದೆ. ಆದುದರಿಂದ ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ವಾಣಿಜ್ಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

o/c.

ಸಹಿ/-
ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

M/s. Prestige City Properties
Rep by Sri. Irfan Razak
# 01, Falcon House, Main Guard Cross Road
Bangalore – 560 001.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು / ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೋರಮಂಗಲ) ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

05/07/19

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

05/7/19

Scanned by CamScanner